**ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು, ಕರ್ನಾಟಕ ಸರ್ಕಾರ ರವರ ನಡವಳಿಗಳು.**

**ವಿಷಯ :** 2019-20ನೇ ಸಾಲಿನಲ್ಲಿ ರಾಜ್ಯದಲ್ಲಿನ ಗ್ರಾಮಾಂತರ ಪ್ರದೇಶಗಳಲ್ಲಿ ಪರಿಶಿಷ್ಟ ಜಾತಿ ಜನಾಂಗದವರಿಗಾಗಿ ಸ್ಮಶಾನ ಭೂಮಿ ಖರೀದಿ ಹಾಗೂ ಸ್ಮಶಾನ ಸ್ಥಳದಲ್ಲಿ ಇತರೆ ಸೌಲಭ್ಯಗಳನ್ನು ಒದಗಿಸಲು ಅನುದಾನ ಬಿಡುಗಡೆ ಮಾಡುವ ಕುರಿತು.

**ಉಲ್ಲೇಖ :**
1) ಸರ್ಕಾರದ ಆದೇಶ ಸಂಖ್ಯೆ: ಸಕಇ-322: ಪವಯೋ-2015, ದಿನಾಂಕ: 19-10-2015.
2) ಸರ್ಕಾರದ ಆದೇಶ ಸಂಖ್ಯೆ: ಸಕಇ-10: ಪವಯೋ-2019, ದಿನಾಂಕ: 18-06-2019.
3) ಸರ್ಕಾರದ ಆದೇಶ ಸಂ: ಸಕಇ-49: ಎಸ್‌ಎಲ್‌ಪಿ-2019, ದಿ:12-07-2019.

******

**ಪ್ರಸ್ತಾವನೆ:**

ರಾಜ್ಯದಲ್ಲಿನ ಗ್ರಾಮಾಂತರ ಪ್ರದೇಶಗಳಲ್ಲಿ ಪರಿಶಿಷ್ಟ ಜಾತಿ ಜನಾಂಗದವರಿಗಾಗಿ ಸ್ಮಶಾನ ಭೂಮಿ ಖರೀದಿ ಹಾಗೂ ಸ್ಮಶಾನ ಸ್ಥಳದಲ್ಲಿ ಇತರೆ ಸೌಲಭ್ಯಗಳನ್ನು ಒದಗಿಸುವ ಸಂಬಂಧವಾಗಿ ಉಲ್ಲೇಖ-1 ಮತ್ತು 2ರ ಸರ್ಕಾರದ ಆದೇಶಗಳಲ್ಲಿ ಮಾರ್ಗಸೂಚಿಗಳನ್ನು ರಚಿಸಲಾಗಿರುತ್ತದೆ.

2019-20ನೇ ಸಾಲಿನಲ್ಲಿ ಪರಿಶಿಷ್ಟ ಜಾತಿಯವರ ವಿವಿಧ ಅಭಿವೃದ್ಧಿ ಯೋಜನೆಯ ಬಂಡವಾಳ ಲೆಕ್ಕ ಶೀರ್ಷಿಕೆ: 4225-01-796-0-01 ರಲ್ಲಿ ಸದರಿ ಕಾರ್ಯಕ್ರಮದಡಿ ರೂ.1000.00 ಲಕ್ಷಗಳನ್ನು ನಿಗಧಿಪಡಿಸಿ ಮೊದಲನೇ ಕಂತಾಗಿ ರೂ.500.00 ಲಕ್ಷಗಳನ್ನು ಉಲ್ಲೇಖ-3ರ ಸರ್ಕಾರದ ಆದೇಶದಲ್ಲಿ ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ರವರಿಗೆ ಬಿಡುಗಡೆ ಮಾಡಲಾಗಿರುತ್ತದೆ.

ಈ ಸಂಬಂಧವಾಗಿ, 2019-20ನೇ ಸಾಲಿನಲ್ಲಿ ಸದರಿ ಕಾರ್ಯಕ್ರಮದಡಿ ಮೊದಲ ಕಂತಿನಲ್ಲಿ ಬಿಡುಗಡೆಗೊಳಸಲಾಗಿರುವ ರೂ.500.00 ಲಕ್ಷಗಳನ್ನು ಸಂಬಂಧಪಟ್ಟ ಜಿಲ್ಲೆಗಳಲ್ಲಿನ ಜಿಲ್ಲಾ ಮಟ್ಟದ ಸಮಾಜ ಕಲ್ಯಾಣಾಧಿಕಾರಿಗಳ ಡ್ರಾಯಿಂಗ್ ಕೋಡ್‌ಗಳಿಗೆ ಬಿಡುಗಡೆ ಮಾಡಲು ತೀರ್ಮಾನಿಸಲಾಗಿರುತ್ತದೆ.

ಆದುದರಿಂದ, ಉಲ್ಲೇಖ-1 ಮತ್ತು 2ರಲ್ಲಿನ ಮಾರ್ಗಸೂಚಿಗಳಿಗೆ ಅನುಗುಣವಾಗಿ ರಾಜ್ಯದಲ್ಲಿನ ಗ್ರಾಮಾಂತರ ಪ್ರದೇಶಗಳಲ್ಲಿ ಪರಿಶಿಷ್ಟ ಜಾತಿ ಜನಾಂಗದವರಿಗಾಗಿ ಸ್ಮಶಾನ ಭೂಮಿ ಖರೀದಿ ಹಾಗೂ ಸ್ಮಶಾನ ಸ್ಥಳದಲ್ಲಿ ಇತರೆ ಸೌಲಭ್ಯಗಳನ್ನು ಒದಗಿಸಲು ಮೇಲ್ಕಂಡಂತೆ ಮೊದಲ ಕಂತಿನಲ್ಲಿ ಬಿಡುಗಡೆ ಮಾಡಲಾಗಿರುವ ರೂ.500.00 ಲಕ್ಷಗಳನ್ನು ಸಂಬಂಧಪಟ್ಟ ಜಿಲ್ಲೆಗಳಲ್ಲಿನ ಜಿಲ್ಲಾ ಮಟ್ಟದ ಸಮಾಜ

Scanned with CamScanner

ಕಲ್ಯಾಣಾಧಿಕಾರಿಗಳ ಡ್ರಾಯಿಂಗ್ ಕೋಡ್‌ಗಳಿಗೆ ಅಪ್‌ಲೋಡ್ ಮಾಡಿ, ಅನುದಾನವನ್ನು ಬಿಡುಗಡೆ ಮಾಡಲು ಉದ್ದೇಶಿಸಿರುವುದರಿಂದ ಈ ಕೆಳಕಂಡ ಆದೇಶ.

ಸಂಖ್ಯೆ: ಸಕನಿ: ಸ್ಮ.ಭೂ: ಸಿಆರ್-06: 2019-20 ದಿನಾಂಕ:30-07-2019.

**ಆ ದೇ ಶ**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳನ್ನು ಅನುಸರಿಸಿ, 2019-20ನೇ ಸಾಲಿನಲ್ಲಿ ರಾಜ್ಯದಲ್ಲಿನ ಗ್ರಾಮಾಂತರ ಪ್ರದೇಶಗಳಲ್ಲಿ ಪರಿಶಿಷ್ಟ ಜಾತಿ ಜನಂಗದವರಿಗಾಗಿ ಸ್ಮಶಾನ ಭೂಮಿ ಖರೀದಿ ಹಾಗೂ ಸ್ಮಶಾನದ ಸ್ಥಳದಲ್ಲಿ ಇನ್ನಿತರೆ ಮೂಲಭೂತ ಸೌಲಭ್ಯಗಳನ್ನು ಒದಗಿಸುವ ಸಂಬಂಧವಾಗಿ ರೂ.500.00 ಲಕ್ಷಗಳನ್ನು ಅಗತ್ಯ ಷರತ್ತುಗಳಿಗೆ ಒಳಪಡಿಸಿ ಈ ಕೆಳಕಂಡಂತೆ ಸಂಬಂಧಪಟ್ಟ ಜಿಲ್ಲೆಗಳಲ್ಲಿನ ಜಿಲ್ಲಾ ಮಟ್ಟದ ಸಮಾಜ ಕಲ್ಯಾಣಾಧಿಕಾರಿಗಳ (ಜಂಟಿ/ ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ) ಡ್ರಾಯಿಂಗ್ ಕೋಡ್‌ಗಳಿಗೆ ಅಪ್‌ಲೋಡ್ ಮಾಡಿ, ಜಿಲ್ಲಾ ಖಜಾನೆಯ **DDO Code** ಗಳಿಗೆ ಅನುದಾನವನ್ನು ಬಿಡುಗಡೆ ಮಾಡಲು ಮುಖ್ಯ ಲೆಕ್ಕಾಧಿಕಾರಿಗಳು, ಕೇಂದ್ರ ಕಛೇರಿ, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ರವರಿಗೆ ಆದೇಶಿಸಿದೆ.

ರೂ.ಲಕ್ಷಗಳಲ್ಲಿ

| ಕ್ರ. ಸಂ | ಅನುದಾನ ಬಿಡುಗಡೆ ಮಾಡಿದ ಅಧಿಕಾರಿಗಳ ವಿವರ | ಜಿಲ್ಲೆಯ ವಿವರ | ಜಿಲ್ಲಾ ಕೋಡ್ | ಡಿ.ಡಿ.ಓ. ಕೋಡ್ | ಬಿಡುಗಡೆ ಮಾಡಿದ ಅನುದಾನ |
|---|---|---|---|---|---|
| 1 | ಜಂಟಿ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ. | ಬೆಂಗಳೂರು ನಗರ | 1401 | 176830 | 16.66 |
| 2 | ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ. | ಬೆಂಗಳೂರು ಗ್ರಾಮಾಂತರ | 402 | 176560 | 16.86 |
| 3 | ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ. | ಚಿತ್ರದುರ್ಗ | 403 | 176850 | 16.66 |
| 4 | ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ. | ದಾವಣಗೆರೆ | 451 | 176650 | 16.66 |
| 5 | ಜಂಟಿ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ. | ಕೋಲಾರ | 404 | 176720 | 16.66 |
| 6 | ಜಂಟಿ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ. | ತುಮಕೂರು | 406 | 176750 | 16.66 |
| 7 | ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ. | ರಾಮನಗರ | 452 | 176710 | 16.66 |
| 8 | ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ. | ಚಿಕ್ಕಬಳ್ಳಾಪುರ | 453 | 176570 | 16.66 |
| 9 | ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ. | ಶಿವಮೊಗ್ಗ | 405 | 176610 | 16.66 |

Scanned with CamScanner

| | | | | | |
|---|---|---|---|---|---|
| 10 | ಜಂಟಿ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ. | ಮೈಸೂರು | 407 | 176780 | 16.66 |
| 11 | ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ. | ಚಾಮರಾಜನಗರ | 456 | 176590 | 16.66 |
| 12 | ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ. | ಮಂಡ್ಯ | 412 | 176620 | 16.66 |
| 13 | ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ. | ಹಾಸನ | 410 | 176740 | 16.66 |
| 14 | ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ. | ಚಿಕ್ಕಮಗಳೂರು | 408 | 176680 | 16.66 |
| 15 | ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ. | ಕೊಡಗು | 411 | 176640 | 16.66 |
| 16 | ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ. | ದಕ್ಷಿಣ ಕನ್ನಡ | 409 | 176700 | 16.66 |
| 17 | ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ. | ಉಡುಪಿ | 457 | 176920 | 16.66 |
| 18 | ಜಂಟಿ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ. | ಬೆಳಗಾವಿ | 413 | 176930 | 16.66 |
| 19 | ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ. | ವಿಜಾಪುರ | 414 | 176660 | 16.66 |
| 20 | ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ. | ಬಾಗಲಕೋಟೆ | 461 | 176580 | 16.66 |
| 21 | ಜಂಟಿ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ. | ಧಾರವಾಡ | 415 | 176790 | 16.66 |
| 22 | ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ. | ಗದಗ | 462 | 176690 | 16.66 |
| 23 | ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ. | ಹಾವೇರಿ | 463 | 176730 | 16.66 |
| 24 | ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ. | ಉತ್ತರ ಕನ್ನಡ | 416 | 176770 | 16.66 |
| 25 | ಜಂಟಿ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ. | ಕಲಬುರಗಿ | 417 | 176600 | 16.66 |
| 26 | ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ. | ರಾಯಚೂರು | 420 | 177060 | 16.66 |
| 27 | ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ. | ಕೊಪ್ಪಳ | 466 | 176630 | 16.66 |
| 28 | ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ. | ಬಳ್ಳಾರಿ | 418 | 176760 | 16.66 |
| 29 | ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ. | ಬೀದರ್ | 419 | 176670 | 16.66 |

Scanned with CamScanner

| | | | | | |
|---|---|---|---|---|---|
| 30 | ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ. | ಯಾದಗಿರಿ | 421 | 333190 | 16.66 |
| | ಒಟ್ಟು | | | | 500.00 |

**ಷರತ್ತುಗಳು.**

1. ಸರ್ಕಾರದ ಆದೇಶ ಸಂಖ್ಯೆ: ಸಕಇ-322: ಪವಯೋ-2015, ದಿನಾಂಕ: 19-10-2015 ಮತ್ತು ಸರ್ಕಾರದ ಆದೇಶ ಸಂಖ್ಯೆ: ಸಕಇ-10: ಪವಯೋ-2019, ದಿನಾಂಕ: 18-06-2019ರ ಮಾರ್ಗಸೂಚಿಗಳನ್ವಯ ಕಾರ್ಯಕ್ರಮವನ್ನು ಅನುಷ್ಠಾನಗೊಳಸುವುದು.
2. ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999 ರನ್ವಯ ಕಾಮಗಾರಿಗಳನ್ನು ಕೈಗೊಳ್ಳುವುದು.
3. ಜಿಲ್ಲೆಗಳಗೆ ಹಂಚಿಕೆ ಮಾಡಿ ಬಿಡುಗಡೆ ಮಾಡಲಾಗಿರುವ ಅನುದಾನದಲ್ಲಿ ಚಾಲ್ತಿಯಲ್ಲಿರುವ ಮಾರ್ಗಸೂಚಿಗಳನ್ವಯ ಸ್ಮಶಾನ ಭೂಮಿಗೆ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಒದಗಿಸುವುದು.
4. ಮೇಲ್ಕಂಡಂತೆ ಬಿಡುಗಡೆ ಮಾಡಲಾಗಿರುವ ಅನುದಾನದಲ್ಲಿ ಸಂಬಂಧಪಟ್ಟ ಜಿಲ್ಲೆಗಳ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಕಾಮಗಾರಿಗಳನ್ನು ಆಯ್ಕೆ ಮಾಡಿ, ಈ ಸಂಬಂಧವಾಗಿ ಸರ್ಕಾರಿ ನಿರ್ಮಾಣ ಏಜೆನ್ಸಿಗಳ ವತಿಯಿಂದ ಸಿದ್ಧಪಡಿಸಲಾಗಿರುವ ಅಂದಾಜು ಪಟ್ಟಿಗಳಗೆ ಜಿಲ್ಲಾಧಿಕಾರಿಗಳಗೆ ಪ್ರದ್ದತ್ತವಾಗಿರುವ ಆರ್ಥಿಕ ಅಧಿಕಾರದನ್ವಯ ಆಡಳತಾತ್ಮಕ ಅನುಮೋದನೆ ಪಡೆದು ಕಾಮಗಾರಿಗಳನ್ನು ಕೈಗೊಳ್ಳತಕ್ಕದ್ದು.
5. ಹಂಚಿಕೆ ಮಾಡಿ ಬಿಡುಗಡೆ ಮಾಡಿರುವ ಮೊತ್ತದ ಕಾಮಗಾರಿಯನ್ನು ಕೈಗೊಂಡು ಪೂರ್ಣಗೊಳಸತಕ್ಕದ್ದು.
6. ಪ್ರಸ್ತಾಪಿತ ಸ್ಮಶಾನ ಭೂಮಿ ಪರಿಶಿಷ್ಟ ಜಾತಿ ಜನಾಂಗದವರಿಗೆ ಮೀಸಲರಿಸಿರುವ ಸ್ಮಶಾನ ಭೂಮಿಯೇ ಎಂದು ಖಾತ್ರಿ ಪಡಿಸುವುದು ಸಂಬಂಧಪಟ್ಟ ಜಿಲ್ಲೆಗಳಲ್ಲಿನ ಸಮಾಜ ಕಲ್ಯಾಣ ಇಲಾಖೆ ಜಂಟಿ/ಉಪ ನಿರ್ದೇಶಕರುಗಳ ಜವಾಬ್ದಾರಿಯಾಗಿರುತ್ತದೆ.
7. ಪ್ರಸ್ತಾಪಿತ ಸ್ಮಶಾನ ಭೂಮಿಯ ಕಂದಾಯ ದಾಖಲೆಗಳನ್ನು ಪಡೆಯುವುದು ಅನುದಾನವನ್ನು ಬಿಡುಗಡೆ ಮಾಡುವುದು.

Scanned with CamScanner

8. ಬಿಡುಗಡೆ ಮಾಡಲಾದ ಅನುದಾನವನ್ನು ಪೂರ್ಣ ಪ್ರಮಾಣದಲ್ಲಿ ವೆಚ್ಚ ಮಾಡದೆ, ವ್ಯಪಗತ ಮಾಡಿದಲ್ಲಿ ಸಂಬಂಧಪಟ್ಟ ಜಿಲ್ಲೆಗಳಲ್ಲಿನ ಜಿಲ್ಲಾ ಮಟ್ಟದ ಸಮಾಜ ಕಲ್ಯಾಣಾಧಿಕಾರಿಗಳನ್ನೇ ನೇರ ಹೊಣೆಗಾರರನ್ನಾಗಿ ಮಾಡಲಾಗುವುದು.

ಈ ಸಂಬಂಧದ ವೆಚ್ಚವನ್ನು 2019-20ನೇ ಸಾಲಿನ ಪರಿಶಿಷ್ಟ ಜಾತಿಯ ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳ ಬಂಡವಾಳ ಲೆಕ್ಕಶೀರ್ಷಿಕೆ: 4225-01-796-0-01 ರಡಿ ಪರಿಶಿಷ್ಟ ಜಾತಿಯವರ ಸ್ಮಶಾನ ಭೂಮಿ ಅಭಿವೃದ್ಧಿ ಕಾರ್ಯಕ್ರಮಕ್ಕಾಗಿ ಮೊದಲ ಕಂತಿನಲ್ಲಿ ಬಿಡುಗಡೆ ಮಾಡಿರುವ ರೂ.500.00 ಲಕ್ಷಗಳ ಅನುದಾನದಲ್ಲಿ ಭರಿಸತಕ್ಕದ್ದು.

ಆಯುಕ್ತರು,
ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.

**<u>ಪ್ರತಿಯನ್ನು ಕೆಳಕಂಡವರಿಗೆ ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ ರವಾನಿಸಿದೆ:-</u>**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
3. ಜಿಲ್ಲಾಧಿಕಾರಿಗಳು, ಎಲ್ಲಾ ಜಿಲ್ಲೆಗಳು.
4. ಖಜಾನಾದಿಕಾರಿಗಳು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
5. ರಾಜ್ಯದ ಎಲ್ಲಾ ಜಿಲ್ಲೆಗಳ ಖಜಾನಾಧಿಕಾರಿಗಳಿಗೆ ಜಂಟಿ/ ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಸಂಬಂಧಪಟ್ಟ ಜಿಲ್ಲೆಗಳು ರವರ ಮುಖಾಂತರ ರವಾನಿಸಿದೆ.
6. ಮುಖ್ಯ ಲೆಕ್ಕಾಧಿಕಾರಿಗಳು, ಸಮಾಜ ಕಲ್ಯಾಣ ಇಲಾಖೆ, ಕೇಂದ್ರ ಕಛೇರಿ ಬೆಂಗಳೂರು.
7. ಉಪ ನಿರ್ದೇಶಕರು (ಕೇಂದ್ರ ಸ್ಥಾನ), ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
8. ಜಂಟಿ ನಿರ್ದೇಶಕರು/ ಉಪ ನಿರ್ದೇಶಕರು, ಸಮಾಜ ಕ್ಯಲ್ಯಾಣ ಇಲಾಖೆ, ಎಲ್ಲಾ ಜಿಲ್ಲೆಗಳು.
9. ಉಪನಿರ್ದೇಶಕರು, ನಂ.49, ಖಜಾನೆ ನೆಟ್ ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, 2ನೇ ಮಹಡಿ, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
10. ಕಛೇರಿ ಪ್ರತಿ.

Scanned with CamScanner